ರಚಿಸಲಾಗುವುದು?

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಂಗಳೂರು ನಗರದಲ್ಲಿ ಸರ್ಕಾರಿ ಹಾಗೂ ಅನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿನ ಹುದ್ದೆಗಳ ಭರ್ತಿ

884 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳೆಷ್ಟು?

ಆ) ಬೆಂಗಳೂರು ನಗರದಲ್ಲಿರುವ ಅನುದಾನ ಪಡೆಯುತ್ತಿರುವ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳೆಷ್ಟು?

ಇ) ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಎಷ್ಟು?

ಈ) ಸರ್ಕಾರಿ ಹಾಗೂ ಅನುದಾನ ಪಡೆಯುತ್ತಿರುವ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರತಕ್ಕ ಶಿಕ್ಷಕರ ಹುದ್ದೆಗಳೆಷ್ಟು?

ಉ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

		ಪ್ರಾಥಮಿಕ ಶಾಲೆ	ಮಾಧ್ಯಮಿಕ ಶಾಲೆ	ಪ್ರೌಢ ಶಾಲೆ
ಅ)		644	573	064
ಆ)		91	256	232
ಇ)	ಸರ್ಕಾರಿ (ಪ್ರಾಥಮಿಕ ಮತ್ತು ಮಾಧ್ಯಮಿಕ)	254790		21547
	ಅನುದಾನಿತ (ಪ್ರಾಥಮಿಕ ಮತ್ತು ಮಾಧ್ಯಮಿಕ)	248472		94664
ಈ)	ಸರ್ಕಾರಿ (ಪ್ರಾಥಮಿಕ ಮತ್ತು ಮಾಧ್ಯಮಿಕ)	04		029
	ಅನುದಾನಿತ (ಪ್ರಾಥಮಿಕ ಮತ್ತು ಮಾಧ್ಯಮಿಕ)	(ಮಾಹಿತಿ ಲಭ್ಯವಿಲ್ಲ)		259

ಉ) ಸರ್ಕಾರಿ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ

ಹುದ್ದೆಗಳನ್ನು ಭರ್ತಿಮಾಡುವ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡುವ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಅನುದಾನಿತ ಪ್ರೌಢ ಶಾಲೆಗಳಲ್ಲಿ ಹುದ್ದೆಗಳು ಖಾಲಿ ಇರುವುದಿಲ್ಲ. ಅನುದಾನಿತ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಮಿತವ್ಯಯ ಸಡಿಲಿಸಿದ್ದು, ಮೀಸಲಾತಿ ಮತ್ತು ನೇಮಕಾತಿ ನಿಯಮಾನುಸಾರ ಅನುಮತಿ ಪಡೆದು ಸದರಿ ಹುದ್ದೆಗಳನ್ನು ಭರ್ತಿಮಾಡಿಕೊಂಡಿದ್ದಲ್ಲಿ, ಇಲಾಖೆಯಿಂದ ಅನುಮೋದನೆ ನೀಡಲಾಗುತ್ತದೆ.

ಖಾಸಗೀ ವೈದ್ಯಕೀಯ ಕಾಲೇಜುಗಳಿಂದ ಸರ್ಕಾರಕ್ಕೆ ಕ್ಲಿನಿಕ್ ಶುಲ್ಕ ಬಾಕಿ.

888 - ಶ್ರೀ ಎನ್. ಕೃಷ್ಣಪ್ಪ (ಬನ್ನೂರು) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಖಾಸಗೀ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಇವುಗಳ ಪೈಕಿ ಸರ್ಕಾರಕ್ಕೆ ಕ್ಲಿನಿಕಲ್ ಶುಲ್ಕ ಬಾಕಿ ನೀಡಬೇಕಾದ ಖಾಸಗಿ ವೈದ್ಯಕೀಯ ಕಾಲೇಜುಗಳಾವುವು?

ಇ) ಬಾಕಿ ಬರಬೇಕಾದ ಮೊತ್ತವೆಷ್ಟು? (ಕಾಲೇಜುವಾರು ವಿವರನೀಡುವುದು)

ಈ) ಬಾಕಿ ಇರತಕ್ಕ ಹಣವನ್ನು ವಸೂಲು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಉ) ಬಾಕಿ ಪಾವತಿ ಮಾಡದೇ ಇರತಕ್ಕ ಕಾಲೇಜುಗಳಿಗೆ ಸರ್ಕಾರದ ಆಸ್ಪತ್ರೆಯ ಸೌಲಭ್ಯ ನಿಲ್ಲಿಸಲು ಸರ್ಕಾರ ಉದ್ದೇಶಿಸಿದೆಯೇ?

ಊ) ಹಾಗಿದ್ದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುವುದಿಲ್ಲವೇ?

ಋ) ಈ ರೀತಿ ವಸೂಲಾದ ಶುಲ್ಕದ ಹಣವನ್ನು ಆಯಾ ಸರ್ಕಾರಿ ಆಸ್ಪತ್ರೆಗಳ ಅಭಿವೃದ್ಧಿಗಾಗಿಯೇ ಖರ್ಚು ಮಾಡಲಾಗುವುದೇ? ಹಾಗಿದ್ದಲ್ಲಿ ಪೂರ್ಣ ವಿವರ ನೀಡುವುದು.

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿರುವ ಖಾಸಗೀ ವೈದ್ಯಕೀಯ ಕಾಲೇಜುಗಳು 14

ಆ) ಕ್ಲಿನಿಕಲ್ ಶುಲ್ಕ ಬಾಕಿ ನೀಡಬೇಕಾದ ಖಾಸಗೀ ವೈದ್ಯಕೀಯ ಕಾಲೇಜುಗಳ ವಿವರದ ಪಟ್ಟಿ ಲಗತ್ತಿಸಿದೆ.

ಇ) ಬಾಕಿ ಬರಬೇಕಾದ ಮೊತ್ತ ರೂ. 70,95,682.00 (ಕಾಲೇಜುವಾರು ವಿವರದ ಪಟ್ಟಿ ಲಗತ್ತಿಸಿದೆ.)

ಈ) ಪಾವತಿ ಮಾಡಬೇಕಾದ ಕ್ಲಿನಿಕಲ್ ಶುಲ್ಕವನ್ನು ಪಾವತಿಸಿ ವರದಿಯನ್ನು ಕಳುಹಿಸುವಂತೆ ಸಂಬಂಧಿಸಿದ ವೈದ್ಯಕೀಯ ಕಾಲೇಜುಗಳ ಪ್ರಾಂಶುಪಾಲರಿಗೆ ಹಾಗೂ ಸರ್ಕಾರಿ ಆಸ್ಪತ್ರೆಯ ಅಧೀಕ್ಷಕರು: ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳಿಗೆ ಸೂಚನೆಯನ್ನು ನೀಡಲಾಗಿದೆ.